ಅ) ಹೌದು

ಇ) ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿಗೆ ವಿವರವಾದ ವರದಿಯನ್ನು ಸಲ್ಲಿಸಿದ್ದು ಕೂಡಲೇ ದುರಸ್ತಿಪಡಿಸಿಕೊಡಲು ಕೇಳಿಕೊಳ್ಳಲಾಗಿದೆ.

ಪ್ರಾಥಮಿಕ ಸಹಕಾರಿ ಸಂಸ್ಥೆಗಳಲ್ಲಿ ಮಹಿಳೆಗೆ ಉಚಿತ ಸದಸ್ಯತ್ವ

2433 - ಶ್ರೀ ಕೆ. ಪ್ರತಾಪ ಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಾಥಮಿಕ ಸಹಕಾರಿ ಸಂಘಗಳಲ್ಲಿ ಮಹಿಳೆಯರಿಗೆ ಉಚಿತ ಸದಸ್ಯತ್ವ ಕೊಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಯೋಜನೆಯಲ್ಲಿ ಕಳೆದ 2 ವರ್ಷಗಳಿಂದ ಉಚಿತವಾಗಿ ನೊಂದಾಯಿಸಲಾದ ಮಹಿಳಾ ಸದಸ್ಯರ ಸಂಖ್ಯೆ ಎಷ್ಟು?

ಇ) ಕುಂದಾಪುರ ತಾಲ್ಲೂಕಿನಲ್ಲಿ ಕಳೆದ 2ವರ್ಷಗಳಿಂದ ಉಚಿತವಾಗಿ ನೊಂದಾಯಿಸಲಾದ ಮಹಿಳಾ ಸದಸ್ಯರ ಸಂಖ್ಯೆ ಎಷ್ಟು?

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ಇಲ್ಲ, ಆದರೆ ಸಹಕಾರ ಸಂಘಗಳಲ್ಲಿ ಮಹಿಳೆಯರನ್ನು ಸದಸ್ಯರನ್ನಾಗಿ ನೊಂದಾಯಿಸಿಕೊಳ್ಳಲು ಸರ್ಕಾರ ಒಂದು ಷೇರಿನ ಮೌಲ್ಯದ ಪೂರ್ಣ ಹಣವನ್ನು ಸಹಾಯಧನ ರೂಪದಲ್ಲಿ ಒದಗಿಸುವ ಯೋಜನೆ ಇದೆ.

ಆ) ಉದ್ಭವಿಸುವುದಿಲ್ಲ. ಪ್ರಶ್ನೆ 'ಅ'ದಲ್ಲಿ ವಿವರಿಸಿರುವ ಯೋಜನೆಯಂತೆ ರಾಜ್ಯದಲ್ಲಿ 1993-94 ಮತ್ತು 1994-95ನೇ ಸಾಲುಗಳಲ್ಲಿ ಒಟ್ಟು 1,06,292 ಮಹಿಳೆಯರನ್ನು ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ನೊಂದಾಯಿಸಲಾಗಿದೆ.

ಇ) ಉದ್ಭವಿಸುವುದಿಲ್ಲ. ಆದರೆ (ಅ)ದಲ್ಲಿ ವಿವರಿಸಿರುವ ಯೋಜನೆಯಡಿ ಕಳೆದ 2 ವರ್ಷಗಳಲ್ಲಿ ಕುಂದಾಪುರ ತಾಲ್ಲೂಕಿನಲ್ಲಿ 1239 ಜನ ಮಹಿಳೆಯರನ್ನು ಸದಸ್ಯರನ್ನಾಗಿ ನೊಂದಾಯಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೊರತೆಯಿರುವ ಕಂದಾಯ ಇಲಾಖೆಯ ನೌಕರರು

2432 - ಶ್ರೀ ಕೆ. ಪ್ರತಾಪ್ ಚಂದ್ರ ಶೆಟ್ಟಿ : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೊರತೆಯಿರುವ ಕಂದಾಯ ಇಲಾಖೆಯ ನೌಕರರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರವನ್ನು ಒದಗಿಸುವುದು).

ಆ) ಇವುಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) 105

ತಾಲ್ಲೂಕುವಾರು ವಿವರ ಈ ರೀತಿ ಇದೆ

ಮಂಗಳೂರು	-	9
ಬಂಟ್ವಾಳ	-	7
ಪುತ್ತೂರು	-	17
ಸುಳ್ಯ	-	13
ಬೆಳ್ತಂಗಡಿ	-	5